# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 892 |
| ಮಾನ್ಯ ಸದಸ್ಯರ ಹೆಸರು | ಡಾ\|\| ತಳವಾರ ಸಾಬಣ್ಣಾ<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 23.02.2024 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಿವಿಧ ವಿಶ್ವ ವಿದ್ಯಾಲಯಗಳಲ್ಲಿ ಪಿ.ಹೆಚ್.ಡಿ ಸಂಶೋಧನಾ ಅಧ್ಯಯನ ಕೈಗೊಳ್ಳುತ್ತಿರುವ ಹಿಂದುಳಿದ ವರ್ಗಗಳ (ಒಬಿಸಿ) ವಿದ್ಯಾರ್ಥಿಗಳಿಗೆ ಫೆಲೋಷಿಪ್ ಸಿಗದೆ ಇರುವುದಕ್ಕೆ ಕಾರಣಗಳೇನು; | ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಪೂರ್ಣಾವಧಿ ಪಿ.ಹೆಚ್.ಡಿ ಅಧ್ಯಯನ ಮಾಡುತ್ತಿದ್ದು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಆಯ್ಕೆಯಾಗಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೂ ಫೆಲೋಶಿಪ್ ಅನ್ನು ನೀಡಲಾಗುತ್ತಿದೆ. |
| ಆ) | 2021-2023ನೇ ಸಾಲಿನವರೆಗೆ ಕೋವಿಡ್ ಕಾರಣ ನೀಡಿ ಪಿ.ಹೆಚ್.ಡಿ ಅಧ್ಯಯನ ಮಾಡುವ ವಿದ್ಯಾರ್ಥಿಗಳಿಗೆ ಫೆಲೋಷಿಪ್ ನೀಡದೆ ಇರುವುದರಿಂದ ಫೆಬ್ರುವರಿ-2023 ರಿಂದ ಫೆಲೋಷಿಪ್ ನೀಡಲು ಸರ್ಕಾರ ಯಾವ ಕಾರಣಕ್ಕಾಗಿ ವಿಳಂಬ ನೀತಿ ಅನುಸರಿಸುತ್ತಿದೆ; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಆಯ್ಕೆಯಾಗಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೂ ನಿಗದಿತ ಸಮಯದಲ್ಲಿ ಫೆಲೋಶಿಪ್ ಅನ್ನು ಕಾಲ-ಕಾಲಕ್ಕೆ ಇಲಾಖೆಯಿಂದ ಪಾವತಿಸಲಾಗುತಿದ್ದು, ವಿವರಗಳು ಕೆಳಕಂಡಂತಿವೆ:-<br>• 2021-22ನೇ ಸಾಲಿನಲ್ಲಿ 749 ನವೀಕರಣ ವಿದ್ಯಾರ್ಥಿಗಳು ಹಾಗೂ 507 ಹೊಸ ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 1256 ವಿದ್ಯಾರ್ಥಿಗಳಿಗೆ ಒಟ್ಟು ರೂ.1206.60 ಲಕ್ಷಗಳ ಪಿಹೆಚ್.ಡಿ. ವ್ಯಾಸಂಗ ವೇತನ ಪಾವತಿಸಲಾಗಿರುತ್ತದೆ.<br>• 2022-23ನೇ ಸಾಲಿನಲ್ಲಿ 812 ನವೀಕರಣ ವಿದ್ಯಾರ್ಥಿಗಳು ಹಾಗೂ 171 ಹೊಸ ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 983 ವಿದ್ಯಾರ್ಥಿಗಳಿಗೆ ಒಟ್ಟು ರೂ.863.30ಲಕ್ಷಗಳ ಪಿಹೆಚ್.ಡಿ. ವ್ಯಾಸಂಗ ವೇತನ ಪಾವತಿಸಲಾಗಿರುತ್ತದೆ.<br>• 2023-24ನೇ ಸಾಲಿನಲ್ಲಿ 622 ನವೀಕರಣ ವಿದ್ಯಾರ್ಥಿಗಳಿಗೆ ಜನವರಿ-2024ರ ವರೆಗೆ ರೂ.616.30 ಲಕ್ಷಗಳ ಪಿಹೆಚ್.ಡಿ. ವ್ಯಾಸಂಗ ವೇತನ ಪಾವತಿಸಲಾಗಿರುತ್ತದೆ ಮತ್ತು 249 ಹೊಸ ವಿದ್ಯಾರ್ಥಿಗಳಿಗೆ ವ್ಯಾಸಂಗ ವೇತನ ಪಾವತಿಸಲು ಕ್ರಮವಹಿಸಲಾಗಿರುತ್ತದೆ. |

| | | |
|---|---|---|
| ಇ) | ಪಿ.ಹೆಚ್.ಡಿ ಸಂಶೋಧನೆ ಕೈಗೊಳ್ಳಬೇಕಾದ ಶೈಕ್ಷಣಿಕ ಮತ್ತು ದಿನನಿತ್ಯ ಜೀವನದ ಖರ್ಚನ್ನು ವಿದ್ಯಾರ್ಥಿಗಳು ಭರಿಸಬೇಕಾಗಿದ್ದು ಹಿಂದುಳಿದ ವಿದ್ಯಾರ್ಥಿಗಳಿಗೆ ಈ ಖರ್ಚು ಹೊರೆಯಾಗಿ ಗುಣಮಟ್ಟದ ಸಂಶೋಧನೆ ಮತ್ತು ಶಿಕ್ಷಣಕ್ಕೆ ತೊಂದರೆ ಆಗುವುದಿಲ್ಲವೆ? | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಆಯ್ಕೆಯಾಗಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೂ ನಿಗದಿತ ಸಮಯದಲ್ಲಿ ಫೆಲೋಶಿಪ್ ಅನ್ನು ಕಾಲ-ಕಾಲಕ್ಕೆ ಇಲಾಖೆಯಿಂದ ಪಾವತಿಸಲಾಗುತ್ತಿದ್ದು, ವಿದ್ಯಾರ್ಥಿಗಳ ಸಂಶೋಧನೆ ಮತ್ತು ಶಿಕ್ಷಣಕ್ಕೆ ತೊಂದರೆ ಅಗುವ ಪ್ರಶ್ನೆ ಉದ್ಭವಿಸುವುದಿಲ್ಲ. |

**ಕಡತ ಸಂಖ್ಯೆ: ಬಿಸಿಡಬ್ಲ್ಯೂ 206 ಬಿಎಂಎಸ್ 2024**

**(ಶಿವರಾಜ .ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ
ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.